# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 12(70) |
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 11.08.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು . |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಆರಂಭಿಸಲು ಸರ್ಕಾರವು ಹೊರಡಿಸಿರುವ ಅಧಿಸೂಚನೆ ಸಂಖ್ಯೆ : ಇಡಿ/709/ ಪಿಜಿಸಿ/2017, ದಿನಾಂಕ:08.03.2018ರ ಅಧಿಸೂಚನೆಯಲ್ಲಿ ಶಾಲೆಗಳ ಸಂಯೋಜನೆ / ಅನುಮತಿ ಪಡೆಯಲು ನಗರ ಹಾಗೂ ಇತರೆ ಭಾಗಗಳಲ್ಲಿ ಜಮೀನಿಗೆ ಸಂಬಂಧಿಸಿದಂತೆ ನಿರ್ಧಿಷ್ಟ ಪಡಿಸಲಾಗಿರುವ ವಿಸ್ತೀರ್ಣವನು, ಯಾವ ಮಾನದಂಡದಲ್ಲಿ ನಿಗದಿಪಡಿಸಲಾಗಿದೆ: | ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ನಿರ್ದಿಷ್ಟಪಡಿಸಲಾಗಿರುವ ವಿಸ್ತೀರ್ಣವನ್ನು ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್ 19 ಮತ್ತು 25ರಲ್ಲಿ ಶಾಲಾ ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳನ್ನು ನಿಗದಿಪಡಿಸಬೇಕಾಗಿದ್ದು, ಆದರಂತೆ ಮಾನದಂಡವನ್ನು ನಿಗದಿಪಡಿಸಲಾಗಿದೆ.<br><br>ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ 10ಕ್ಕಿಂತ ಕಡಿಮೆ ಇರುವ ಶಾಲೆಗಳ ಸಂಖ್ಯೆ:17.<br><br>ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ 40:1ರಂತೆ ವಿದ್ಯಾರ್ಥಿ ಶಿಕ್ಷಕರ ಅನುಪಾತವನ್ನು ನಿಗದಿಪಡಿಸಲಾಗಿರುತ್ತದೆ. |
| ಆ) | ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ 10ಕ್ಕಿಂತ ಕಡಿಮೆ ಇರುವ ಶಾಲೆಗಳ ಸಂಖ್ಯೆ ಎಷ್ಟು; ರಾಜ್ಯದ ಶಾಲಾ ಮತ್ತು ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತ ಪ್ರಸ್ತುತ ಎಷ್ಟಿದೆ;(ಶಾಲಾವಾರು ವಿವರ ಒದಗಿಸುವುದು) | |
| ಇ) | ಶಾಲೆಗಳಲ್ಲಿ ಹಲವು ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ವಿದ್ಯಾರ್ಥಿಗಳನ್ನು ಆಕರ್ಷಿಸಲು ಪ್ರಯತ್ನಿಸುತ್ತಿದ್ದರು ಸಹ ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಇಳಿಮುಖವಾಗಲು ಕಾರಣವೇನು; | ಪೋಷಕರು ಆರ್ಥಿಕ ಸಂಕಷ್ಟದಿಂದಾಗಿ ವಲಸೆ ಹೋಗುವುದು.<br><br>ವೈಯಕ್ತಿಕ ಸಮಸ್ಯೆಯಿಂದಾಗಿ ಶಾಲೆಗೆ ಮಕ್ಕಳು ಗೈರು ಹಾಜರಾಗುವುದು.<br><br>ಈ ಮೇಲ್ಕಂಡ ಅಂಶಗಳು ದಾಖಲಾತಿ ಕುಸಿತಕ್ಕೆ ಕಾರಣವಾಗಿದ್ದು ಈ ಅಂಶಗಳ ಸುಧಾರಣೆಗಾಗಿ ದಾಖಲಾತಿ ಹೆಚ್ಚಳಕ್ಕೆ ಸರ್ಕಾರ ಕ್ರಮವಹಿಸಿದೆ. |

..2..

| | | |
|---|---|---|
| ಈ) | ಸಿಂಧನೂರು ತಾಲ್ಲೂಕಿನಲ್ಲಿ ಪ್ರಸಕ್ತ ವರ್ಷಗಳಲ್ಲಿ 171 ಪ್ರೌಢ ಶಾಲಾ ಶಿಕ್ಷಕರ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ 590 ಹುದ್ದೆಗಳು ಖಾಲಿ ಇದ್ದು, ಶೈಕ್ಷಣಿಕ ಚಟುವಟಿಕೆಗಳು ಕುಂಠಿತಗೊಂಡಿದ್ದು, ಇದರ ಪರಿಣಾಮವಾಗಿ ಎಸ್.ಎಸ್.ಎಲ್.ಸಿ ಫಲಿತಾಂಶವು ತುಂಬಾ ಕಡಿಮೆಯಾಗಿರುವುದು ನಿಜವೇ; | ಸಿಂಧನೂರು ತಾಲ್ಲೂಕಿನಲ್ಲಿ ಪ್ರಸಕ್ತ ವರ್ಷಗಳಲ್ಲಿ 171 ಪ್ರೌಢ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತದೆ.<br><br>ಆದರೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸದರಿ ಖಾಲಿ ಹುದ್ದೆಗಳಿಗೆ ಎದುರಾಗಿ ಗೌರವಧನ ಆಧಾರದ ಮೇಲೆ ತಾತ್ಕಾಲಿಕವಾಗಿ 174 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆ ನೀಗಿಸಿ ಶಿಕ್ಷಣ ನೀಡಲಾಗುತ್ತಿದೆ.<br><br>ಸದರಿ ತಾಲ್ಲೂಕಿನಲ್ಲಿ ಶೇಕಡಾ 64.18 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ.<br><br>ಸಿಂಧನೂರು ತಾಲ್ಲೂಕಿನಲ್ಲಿ ಪ್ರಸಕ್ತ ವರ್ಷಗಳಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ 590 ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕ 590 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ. |
| ಉ) | ಹೊಸದಾಗಿ ಪ್ರಾರಂಭವಾಗಿರುವ ವಿಜ್ಞಾನ ವಿಭಾಗಗಳಿಗೆ ಖಾಯಂ ಉಪನ್ಯಾಸಕರ ಲಭ್ಯವಿಲ್ಲದೆ ಇರುವುದರಿಂದ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ವರ್ಗಾವಣೆ ಮುಖಾಂತರ ಅಥವಾ ನಿಯೋಜನೆ ಅಥವಾ ಖಾಯಂ ಉಪನ್ಯಾಸಕರ ಮುಖಾಂತರ ಈ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ? | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಹೊಸದಾಗಿ ಪ್ರಾರಂಭವಾಗಿರುವ ವಿಜ್ಞಾನ ವಿಭಾಗಗಳಿಗೆ ನಿಯೋಜನೆ ಮೂಲಕ ಹಾಗೂ ಅತಿಥಿ ಉಪನ್ಯಾಸಕರುಗಳನ್ನು ನೇಮಿಸಿಕೊಳ್ಳಲು ಜಿಲ್ಲಾ ಉಪ ನಿರ್ದೇಶಕರುಗಳಿಗೆ ಸೂಚಿಸಲಾಗಿರುತ್ತದೆ. |

ಸಂಖ್ಯೆ: ಇಪಿ 271 ಪಿಜಿಸಿ 2025

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು